ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 98 ಜಿಪಸ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:17-03-2018.

**ಇವರಿಂದ:**

**ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)**
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

ಇವರಿಗೆ:

1. **ಪ್ರಾದೇಶಿಕ ಆಯುಕ್ತರು,**
ಮೈಸೂರು ವಿಭಾಗ,
ಮೈಸೂರು.

2. **ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,**
ಜಿಲ್ಲಾ ಪಂಚಾಯತ್,
ಚಿಕ್ಕಮಗಳೂರು.

**ಮಾನ್ಯರೆ,**

**ವಿಷಯ:** ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿಗೆ ಅಡಳಿತಾಧಿಕಾರಿಯನ್ನು ನೇಮಿಸುವ ಕುರಿತು.

**ಉಲ್ಲೇಖ:** ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 98 ಜಿಪಸ 2018, ಬೆಂಗಳೂರು, ದಿನಾಂಕ:16-03-2018.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿಯ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿಯ ಅಧ್ಯಕ್ಷರುಗಳ ಹುದ್ದೆಯು ಖಾಲಿ ಇರುವುದರಿಂದ ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿಯ ಆಡಳಿತವನ್ನು ಸುಗಮವಾಗಿ ನಿರ್ವಹಿಸಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂ.ರಾಜ್ ಅಧಿನಿಯಮ 1993 ರ ಪ್ರಕರಣ 321 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸರ್ಕಾರವು ಮೈಸೂರು ವಿಭಾಗದ ಪ್ರಾದೇಶಿಕ ಆಯುಕ್ತರನ್ನು ಚಿಕ್ಕಮಗಳೂರು ಜಿಲ್ಲಾ ಪಂಚಾಯತಿಯ ಆಡಳಿತಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿರುವ ಆದೇಶವನ್ನು ಕರ್ನಾಟಕ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿರುತ್ತದೆ.

ಆದುದರಿಂದ, ಮುಂದಿನ ಅಗತ್ಯ ಕ್ರಮಕ್ಕಾಗಿ ಅಧಿಸೂಚನೆಯ ಪ್ರತಿಯನ್ನು ತಮಗೆ ಕಳುಹಿಸಲು ನಾನು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,

17/3/2018

(ಪಿ.ದೇವಸಹಾಯಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿ:**

1. ಜಿಲ್ಲಾಧಿಕಾರಿ, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ಇವರಿಗೆ ಇವರ ಮಾಹಿತಿಗಾಗಿ.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು ವಿಧಾನ ಸೌಧ, ಬೆಂಗಳೂರು.
3. ಪ್ರಧಾನ ಕಾರ್ಯದರ್ಶಿ, (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
4. ವ್ಯವಸ್ಥಾಪಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಇವರು ಅಧಿಸೂಚನೆಯ ಪ್ರತಿಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ತಿಳಿಸಿದೆ.
5. ಶಾಖಾ ರಕ್ಷಾ ಕಡತ.

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

**ಅಧಿಕೃತವಾಗಿ ಪ್ರಕಟಿಸಲಾದುದು**

## ವಿಶೇಷ ರಾಜ್ಯ ಪತ್ರಿಕೆ


| ಭಾಗ-I<br>Part-I | ಬೆಂಗಳೂರು, ಶುಕ್ರವಾರ, ಮಾರ್ಚ್ ೧೬, ೨೦೧೮ (ಫಾಲ್ಗುಣ ೨೫, ಶಕ ವರ್ಷ ೧೯೩೯)<br>Bengaluru, Friday, March 16, 2018 (Palguna 25, Shaka Varsha 1939) | ನಂ. ೪೫೮<br>No. 458 |
|---|---|---|


**ಕರ್ನಾಟಕ ಸರ್ಕಾರದ ನಡವಳಿಗಳು**

**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ**

**ವಿಷಯ:** ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿಗೆ ಆಡಳಿತಾಧಿಕಾರಿಯನ್ನು ನೇಮಿಸುವ ಕುರಿತು

**ಓದಲಾಗಿದೆ:**
1. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರ ರಾಜೀನಾಮೆ ಪತ್ರ ದಿನಾಂಕ:01-03-2018.
2. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 98 ಜಿಪಸ 2018 ದಿನಾಂಕ:16-03-2018.
3. ಅಧ್ಯಕ್ಷರು ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರ ಅಧಿಸೂಚನೆ ಸಂಖ್ಯೆ: ಜಿಪಂಚಿ:ಆಕಾ:ಅಶಾ:1111/2017-18 ದಿನಾಂಕ: 09-03-2018.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಚಿಕ್ಕಮಗಳೂರು ಇವರ ಪತ್ರ ಸಂಖ್ಯೆ: ಜಿಪಂಚಿ:ಸಭಾ-012:ಸಿಆರ್-62:2017-18 ದಿನಾಂಕ: 16-03-2018

**ಪ್ರಸ್ತಾವನೆ:**

ಮೇಲೆ ಓದಲಾದ (1) ರ ಪತ್ರದಲ್ಲಿ ಬಿ.ಎಸ್.ಚೈತ್ರಶ್ರೀ, ಅಧ್ಯಕ್ಷರು, ಜಿಲ್ಲಾ ಪಂಚಾಯತ್ ಚಿಕ್ಕಮಗಳೂರು ಇವರು ದಿನಾಂಕ:01-03-2018 ರಂದು ಸರ್ಕಾರಕ್ಕೆ ರಾಜೀನಾಮೆ ಪತ್ರ ಸಲ್ಲಿಸಿ, ಸ್ವ-ಇಚ್ಛೆಯಿಂದ ಚಿಕ್ಕಮಗಳೂರು ಜಿಲ್ಲಾ ಪಂಚಾಯತ್ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡುತ್ತೇನೆ ಎಂದು ತಿಳಿಸಿರುವ ರಾಜೀನಾಮೆ ಪತ್ರವನ್ನು ಸರ್ಕಾರವು ದಿನಾಂಕ: 01-03-2018 ರಂದು ಸ್ವೀಕರಿಸಿರುತ್ತದೆ.

ಮೇಲೆ ಓದಲಾದ (2) ರ ಪತ್ರದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂ.ರಾಜ್ ಅಧಿನಿಯಮ 1993 ಪ್ರಕರಣ 179 (1) ರ ಪ್ರಕಾರ ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರು ದಿನಾಂಕ:15-03-2018 ರವರೆವಿಗೂ ರಾಜೀನಾಮೆಯನ್ನು ಹಿಂಪಡೆದಿರುವುದಿಲ್ಲ. ಆದುದರಿಂದ ದಿನಾಂಕ:16-03-2018 ರಂದು ನಿಯಮಾನುಸಾರ ಚಿಕ್ಕಮಗಳೂರು ಜಿಲ್ಲಾ ಪಂಚಾಯತ್ ಅಧ್ಯಕ್ಷರ ರಾಜೀನಾಮೆಯನ್ನು ಸರ್ಕಾರವು, ಅಂಗೀಕಾರ ಮಾಡಲಾಗಿರುತ್ತದೆ.

ಚಿಕ್ಕಮಗಳೂರು ಜಿಲ್ಲಾ ಪಂಚಾಯತ್ ಅಧ್ಯಕ್ಷರು ಆಯ್ಕೆಯಾಗುವವರೆಗೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂ.ರಾಜ್ ಅಧಿನಿಯಮ 1993 ಪ್ರಕರಣ 194 ರನ್ವಯ ಚಿಕ್ಕಮಗಳೂರು ಜಿಲ್ಲಾ ಪಂಚಾಯತ್, ಉಪಾಧ್ಯಕ್ಷರು, ಅಧ್ಯಕ್ಷರ ಅಧಿಕಾರ ಮತ್ತು ಕರ್ತವ್ಯಗಳನ್ನು ನಿರ್ವಹಿಸಬೇಕಾಗಿರುತ್ತದೆ. ಆದರೆ, ಮೇಲೆ ಓದಲಾದ (3) ರ ಅಧಿಸೂಚನೆ ಅನ್ವಯ ಚಿಕ್ಕಮಗಳೂರು ಜಿಲ್ಲಾ ಪಂಚಾಯತ್ ಉಪಾಧ್ಯಕ್ಷರ ಸ್ಥಾನವು ಖಾಲಿಯಾಗಿರುತ್ತದೆ.

ಆದುದರಿಂದ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂ.ರಾಜ್ ಅಧಿನಿಯಮ 1993 ಪ್ರಕರಣ 179 (6) ರನ್ವಯ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಹುದ್ದೆಗಳೆರಡೂ ತೆರವಾದಲ್ಲಿ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿಯ ಅಧ್ಯಕ್ಷನು, ಅಧ್ಯಕ್ಷ

ಮತ್ತು ಉಪಾಧ್ಯಕ್ಷನನ್ನು ಯುಕ್ತವಾಗಿ ಚುನಾಯಿಸುವವರೆಗೆ ಅಧ್ಯಕ್ಷನ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು ಎಂದು ತಿಳಿಸಲಾಗಿರುತ್ತದೆ.

ಆದರೆ, ಮೇಲೆ ಓದಲಾದ (4) ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಚಿಕ್ಕಮಗಳೂರು ಇವರು ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿಯ ಸ್ಥಾಯಿ ಸಮಿತಿಗಳ ಮೊದಲನೇ ಅವಧಿಯ ದಿನಾಂಕ:31-01-2018 ಕ್ಕೆ ಕೊನೆಗೊಂಡಿದ್ದು, ಈ ಸಂಬಂಧ ಜಿಲ್ಲಾ ಪಂಚಾಯಿತಿಯ ಅಧ್ಯಕ್ಷರು ದಿನಾಂಕ: 31-01-2018 ರಂದು ಸ್ಥಾಯಿ ಸಮಿತಿ ರಚನೆ ಬಗ್ಗೆ ಸಭೆಯನ್ನು ಕರೆದಿದ್ದು, ಕಾರಣಾಂತರದಿಂದ ಸದರಿ ಸಭೆಯು ಮುಂದೂಡಲ್ಪಟ್ಟಿರುತ್ತದೆ. ಆದುದರಿಂದ, ಎರಡನೇ ಅವಧಿಗೆ ಯಾವುದೇ ಸ್ಥಾಯಿ ಸಮಿತಿಗಳು ರಚನೆಯಾಗಿರುವುದಿಲ್ಲ ಎಂದು ತಿಳಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿಯ ಅಧ್ಯಕ್ಷರ ಆಯ್ಕೆಯಾಗುವವರೆಗೆ ಚಿಕ್ಕಮಗಳೂರು ಜಿಲ್ಲಾ ಪಂಚಾಯತ್ ಆಡಳಿತವು ಸುಗಮವಾಗಿ ನಡೆಯಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂ.ರಾಜ್ ಅಧಿನಿಯಮ 1993 ಪ್ರಕರಣ 321 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸರ್ಕಾರವು ಮೈಸೂರು ವಿಭಾಗದ ಪ್ರಾದೇಶಿಕ ಆಯುಕ್ತರನ್ನು ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿ ಆಡಳಿತಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸುವುದು ಅವಶ್ಯಕತೆ ಇರುತ್ತದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 98 ಜಿಪಸ 2018, ಬೆಂಗಳೂರು, ದಿನಾಂಕ: 16-03-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ತತ್‌ಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂ.ರಾಜ್ ಅಧಿನಿಯಮ 1993 ರ ಪ್ರಕರಣ 177 ಮತ್ತು 186 ರನ್ವಯ ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿಯ ಉಳಿದ ಅವಧಿಗೆ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಅಧ್ಯಕ್ಷರು ಆಯ್ಕೆಯಾಗುವವರೆಗೆ ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿಯ ಆಡಳಿತವನ್ನು ನಿರ್ವಹಿಸಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂ.ರಾಜ್ ಅಧಿನಿಯಮ 1993 ರ ಪ್ರಕರಣ 321 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚುಲಾಯಿಸಿ ಸರ್ಕಾರವು ಮೈಸೂರು ವಿಭಾಗದ ಪ್ರಾದೇಶಿಕ ಆಯುಕ್ತರನ್ನು ಚಿಕ್ಕಮಗಳೂರು ಜಿಲ್ಲಾ ಪಂಚಾಯತಿಯ ಆಡಳಿತಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಪಿ. ದೇವಸಹಾಯಂ**
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಓ7) ಪ್ರತಿಗಳು: 100